**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ:ಸಿ4(6) ಸಪ್ರೌಶಾ/ಶಾ.ಕಾ.ಪ್ರ-47/2020-21 ದಿನಾಂಕ: 19.02.2021

**-ಸುತ್ತೋಲೆ-**

ವಿಷಯ: ರಾಜ್ಯದಲ್ಲಿನ ಸರ್ಕಾರಿ, ಅನುದಾನ ಮತ್ತು ಅನುದಾನ ರಹಿತ ಪ್ರೌಢ ಶಾಲೆಗಳಲ್ಲಿನ 6 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆಗಳನ್ನು ಪೂರ್ಣ ಪ್ರಮಾಣದಲ್ಲಿ ಪುನರಾರಂಭ ಮಾಡುವ ಬಗ್ಗೆ.

ಉಲ್ಲೇಖ:
1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 16.02.2021ರಂದು ನಡೆದ ಕೋವಿಡ್-19 ತಾಂತ್ರಿಕ ಸಲಹಾ ಸಮಿತಿಯ ಸಭೆಯಲ್ಲಿ ಕೈಗೊಂಡ ನಿರ್ಣಯಗಳು
2. ಈ ಕಚೇರಿಯ ಸುತ್ತೋಲೆ ಸಂಖ್ಯೆ:ಸಿ4(6) ಸಪ್ರೌಶಾ/ಶಾ.ಕಾ.ಪ್ರ-23/2020-21 ದಿನಾಂಕ:23.12.2020 ಮತ್ತು 29.01.2021
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ, ಬೆಂಗಳೂರು ರವರ ಕಡತದ ಕಂಡಿಕೆ 11ರ ಆದೇಶ ದಿನಾಂಕ: 18.02.2021

**@**

ಉಲ್ಲೇಖ(1)ರಂತೆ ರಾಜ್ಯದಲ್ಲಿ ಪ್ರಸ್ತುತ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭ ಮತ್ತು ವಿದ್ಯಾಗಮ ಕಾರ್ಯಕ್ರಮಗಳ ವಿಸ್ತರಣೆ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಆರೋಗ್ಯ ಇಲಾಖೆಯ ಕೋವಿಡ್-19 ತಾಂತ್ರಿಕ ಸಲಹಾ ಸಮಿತಿಯ ಸದಸ್ಯರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳ ಸಭೆಯಲ್ಲಿ ಬೆಂಗಳೂರು ನಗರದ ಬಿ.ಬಿ.ಎಂ.ಪಿ ವ್ಯಾಪ್ತಿ ಮತ್ತು ಕೇರಳ ರಾಜ್ಯದ ಗಡಿಭಾಗಕ್ಕೆ ಹೊಂದಿಕೊಂಡ ಪ್ರದೇಶಗಳನ್ನು ಹೊರತುಪಡಿಸಿ ಉಳಿದೆಲ್ಲಾ ಕಡೆ 6ನೇ ತರಗತಿಯಿಂದ 8ನೇ ತರಗತಿಯವರೆಗೆ ಪ್ರತಿ ದಿನ ಪೂರ್ಣಾವಧಿ ಶಾಲೆಯನ್ನು ನಡೆಸಲು ಹಾಗೂ ಬೆಂಗಳೂರು ನಗರದ ಬಿ.ಬಿ.ಎಂ.ಪಿ ವ್ಯಾಪ್ತಿ ಮತ್ತು ಕೇರಳ ರಾಜ್ಯದ ಗಡಿಭಾಗಕ್ಕೆ ಹೊಂದಿಕೊಂಡ ಪ್ರದೇಶಗಳಲ್ಲಿ 8ನೇ ತರಗತಿ ಪೂರ್ಣಾವಧಿ ಶಾಲೆ ಪ್ರಾರಂಭ 6 ಮತ್ತು 7ನೇ ತರಗತಿಗಳು ವಿದ್ಯಾಗಮ ಕಾರ್ಯಕ್ರಮ ಮುಂದುವರಿಸುವಂತೆ ತಿರ್ಮಾನಿಸಲಾಗಿದೆ.

ಉಲ್ಲೇಖ(3)ರಂತೆ ಈ ಕುರಿತು ಅನುಮೋದನೆ ಆಗಿರುತ್ತದೆ. ಆದ್ದರಿಂದ ದಿನಾಂಕ; 22.02.2021 ರಿಂದ ಈ ಕೆಳಗಿಂತೆ ಕ್ರಮವಹಿಸಲು ಸೂಚಿಸಿದೆ.

- ದಿನಾಂಕ:22.02.2021ರಿಂದ ಬೆಂಗಳೂರು ನಗರದ ಬಿ.ಬಿ.ಎಂ.ಪಿ ಮತ್ತು ಕೇರಳ ರಾಜ್ಯದ ಗಡಿಗೆ ಹೊಂದಿಕೊಂಡಿರುವ ಪ್ರದೇಶಗಳನ್ನು ಹೊರತುಪಡಿಸಿ, ಉಳಿದ ಕಡೆಗಳಲ್ಲಿ ಈಗಾಗಲೇ ಶಾಲೆಗಳಲ್ಲಿ ಅನುಸರಿಸುತ್ತಿರುವ ಸುರಕ್ಷತಾ ಕ್ರಮಗಳನ್ನು ಮುಂದುವರೆಸಿ, ರಾಜ್ಯದಲ್ಲಿ 6, 7 ಮತ್ತು 8ನೇ ತರಗತಿಗಳನ್ನು ಪ್ರತಿದಿನ ಪೂರ್ಣಾವಧಿ ತರಗತಿಗಳನ್ನು ಪ್ರಾರಂಭಿಸುವುದು.
- ಬೆಂಗಳೂರು ನಗರ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಹಾಗೂ ಕೇರಳ ರಾಜ್ಯದ ಗಡಿಗೆ ಹೊಂದಿಕೊಂಡ ಪ್ರದೇಶಗಳಲ್ಲಿ 6 ರಿಂದ 7ನೇ ತರಗತಿಗೆ ವಿದ್ಯಾಗಮ ಕಾರ್ಯಕ್ರಮವನ್ನು ಮುಂದುವರೆಸುವುದು ಹಾಗೂ 8ನೇ ತರಗತಿಗೆ ಮಾತ್ರ ಪ್ರತಿ ದಿನ ಪೂರ್ಣಾವಧಿ ತರಗತಿಯನ್ನು ಪ್ರಾರಂಭಿಸುವುದು. ಕೇರಳ ರಾಜ್ಯದ ಗಡಿ ಹೊಂದಿಕೊಂಡ ಜಿಲ್ಲೆಗಳ ಜಿಲ್ಲಾಡಳಿತಗಳು ಗಡಿ ಹೊಂದಿಕೊಂಡಿರುವ ಪ್ರದೇಶಗಳನ್ನು (ನಗರ/ಗ್ರಾಮ/ವಲಯ)ಗುರುತಿಸಿ ತೀರ್ಮಾನಿಸುವುದು.
- ರಾಜ್ಯದಲ್ಲಿನ ಆಯ್ದ ಶಾಲೆಗಳಲ್ಲಿ ಮತ್ತು ಹಾಸ್ಟಲ್‌ಗಳಲ್ಲಿ ರ‍್ಯಾಂಡಮ್‌ಆಗಿ ವಿದ್ಯಾರ್ಥಿ, ಶಿಕ್ಷಕರ ಮತ್ತು ಸಿಬ್ಬಂದಿಗಳ ಕೋವಿಡ್ ಪರೀಕ್ಷೆಗಳನ್ನು ಆರೋಗ್ಯ ಇಲಾಖೆಯಿಂದ ನಡೆಸಲು ಕ್ರಮವಹಿಸುವುದು.
- ಕೇರಳ ರಾಜ್ಯದಿಂದ ಬರುವ ಮಕ್ಕಳು, ಶಿಕ್ಷಕರು ಹಾಗೂ ಸಿಬ್ಬಂದಿ ಕಡ್ಡಾಯವಾಗಿ ಕೋವಿಡ್ ಪರೀಕ್ಷೆ ಮಾಡಿಸಿಕೊಳ್ಳುವುದು.
- ಪೂರ್ಣ ಪ್ರಮಾಣದಲ್ಲಿ 6 ರಿಂದ 8ನೇ ತರಗತಿಗಳನ್ನು ನಡೆಸುವುದರಿಂದ ವಿದ್ಯಾರ್ಥಿಗಳು ಮನೆಯಿಂದಲೇ ಮಧ್ಯಾಹ್ನದ ಊಟ/ಉಪಹಾರ ತರುವಂತೆ ವಿದ್ಯಾರ್ಥಿಗಳಿಗೆ ಸೂಚನೆ ನೀಡುವುದು.

➢ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ ಮತ್ತು ಅಲ್ಪ ಸಂಖ್ಯಾತರ ಇಲಾಖೆಗಳಿಂದ ನಡೆಯುತ್ತಿರುವ ವಸತಿ ನಿಲಯಗಳು ಹಾಗೂ ಇತರ ವಸತಿ ನಿಲಯಗಳು ಈ ತರಗತಿ ಮಕ್ಕಳ ಪಾಲನೆಗಾಗಿ ಆರೋಗ್ಯ ಇಲಾಖೆ ನಿಗಧಿಪಡಿಸಿರುವ ಎಸ್.ಓ.ಪಿ ಯನ್ನು ಅನುಸರಿಸಿ ಪ್ರಾರಂಭ ಮಾಡುವುದು.

➢ ಸಾರಿಗೆ ಇಲಾಖೆಯ ವಿವಿಧ ಸಾರಿಗೆ ನಿಗಮಗಳಲ್ಲಿ ವಿದ್ಯಾರ್ಥಿಗಳ ಅಗತ್ಯಕ್ಕೆ ತಕ್ಕಂತೆ ಹೆಚ್ಚುವರಿ ಟ್ರಿಪ್ ಒದಗಿಸಲು ಅವಶ್ಯ ಕ್ರಮವಹಿಸುವುದು.

➢ ಮಕ್ಕಳು ಶಾಲೆಗೆ ಮತ್ತು ವಿದ್ಯಾಗಮ ಕಾರ್ಯಕ್ರಮಕ್ಕೆ ಹಾಜರಾಗುವಾಗ ಪೋಷಕರ ಅನುಮತಿ ಪತ್ರ ತರುವುದು ಕಡ್ಡಾಯ. ಅನುಮತಿ ಪತ್ರದಲ್ಲಿ ಮಗುವಿಗೆ ಯಾವುದೇ ಕೋವಿಡ್-19ರ ಸೋಂಕಿನ ಲಕ್ಷಣಗಳಿರುವುದಿಲ್ಲವೆಂಬುದನ್ನು ದೃಢೀಕರಿಸಬೇಕು.

➢ ಶಾಲೆಗೆ ಹಾಜರಾಗಲು ಬಯಸದೇ ಇರುವ ವಿದ್ಯಾರ್ಥಿಗಳಿಗೆ ಈಗ ಅನುಸರಿಸುತ್ತಿರುವ ಆನ್‌ಲೈನ್/ ಇತರೆ ಪರ್ಯಾಯ ವ್ಯವಸ್ಥೆಯನ್ನು ಮುಂದುವರೆಸಿಕೊಂಡು ಹೋಗಬೇಕು/ಒದಗಿಸಬೇಕು.

➢ ಶಾಲೆಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿ ಕಡ್ಡಾಯವಲ್ಲ.

➢ ಉಳಿದಂತೆ ಉಲ್ಲೇಖ(2)ರ ಸುತ್ತೋಲೆಯಲ್ಲಿ ನಿಗದಿ ಪಡಿಸಿರುವ ಪ್ರಮಾಣಿತ ಕಾರ್ಯಾಚರಣಾ ವಿಧಾನಗಳನ್ನು ಅನುಸರಿಸುವುದು.

**ಪ್ರೌಢ ಶಾಲೆಗಳಲ್ಲಿ 8, 9 ಮತ್ತು 10ನೇ ತರಗತಿಗಳನ್ನು ನಡೆಸಲು ಸಲಹಾತ್ಮಕ ವೇಳಾಪಟ್ಟಿ**

| ದಿನಗಳು | ಸಮಯ | ನಡೆಯುವ ತರಗತಿಗಳು |
|---|---|---|
| ಸೋಮವಾರ | 10.00 ರಿಂದ 4.30 | 8, 9 ಮತ್ತು 10ನೇ |
| ಮಂಗಳವಾರ | 10.00 ರಿಂದ 4.30 | 8, 9 ಮತ್ತು 10ನೇ |
| ಬುಧವಾರ | 10.00 ರಿಂದ 4.30 | 8, 9 ಮತ್ತು 10ನೇ |
| ಗುರುವಾರ | 10.00 ರಿಂದ 4.30 | 8, 9 ಮತ್ತು 10ನೇ |
| ಶುಕ್ರವಾರ | 10.00 ರಿಂದ 4.30 | 8, 9 ಮತ್ತು 10ನೇ |
| ಶನಿವಾರ | 10.00 ರಿಂದ 12.30 | 8, 9 ಮತ್ತು 10ನೇ |

**ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 6, 7 ಮತ್ತು 8ನೇ ತರಗತಿಗಳನ್ನು ನಡೆಸಲು ಸಲಹಾತ್ಮಕ ವೇಳಾಪಟ್ಟಿ (ಬೆಂಗಳೂರು ನಗರ ಬಿ.ಬಿ.ಎಂ.ಪಿ ವ್ಯಾಪ್ತಿ ಮತ್ತು ಕೇರಳ ರಾಜ್ಯದ ಗಡಿಭಾಗಕ್ಕೆ ಹೊಂದಿಕೊಂಡ ಪ್ರದೇಶಗಳು ಹೊರತುಪಡಿಸಿ)**

| ದಿನಗಳು | ಸಮಯ | ನಡೆಯುವ ತರಗತಿಗಳು |
|---|---|---|
| ಸೋಮವಾರ | 10.00 ರಿಂದ 4.30 | 6, 7 ಮತ್ತು 8ನೇ |
| ಮಂಗಳವಾರ | 10.00 ರಿಂದ 4.30 | 6, 7 ಮತ್ತು 8ನೇ |
| ಬುಧವಾರ | 10.00 ರಿಂದ 4.30 | 6, 7 ಮತ್ತು 8ನೇ |
| ಗುರುವಾರ | 10.00 ರಿಂದ 4.30 | 6, 7 ಮತ್ತು 8ನೇ |
| ಶುಕ್ರವಾರ | 10.00 ರಿಂದ 4.30 | 6, 7 ಮತ್ತು 8ನೇ |
| ಶನಿವಾರ | 10.00 ರಿಂದ 12.30 | 6, 7 ಮತ್ತು 8ನೇ |

**ಬೆಂಗಳೂರು ನಗರ ಬಿ.ಬಿ.ಎಂ.ಪಿ ವ್ಯಾಪ್ತಿ ಮತ್ತು ಕೇರಳ ರಾಜ್ಯದ ಗಡಿಭಾಗಕ್ಕೆ ಹೊಂದಿಕೊಂಡ ಪ್ರದೇಶಗಳಲ್ಲಿ 6,7ನೇ ತರಗತಿ ವಿದ್ಯಾಗಮ ಮತ್ತು 8ನೇ ತರಗತಿ ಪೂರ್ಣಾವಧಿ ಶಾಲೆ ನಡೆಸಲು ಸಲಹಾತ್ಮಕ ವೇಳಾಪಟ್ಟಿ.**

**6 ರಿಂದ 8ನೇ ತರಗತಿ ಇರುವ ಹಿರಿಯ ಪ್ರಾಥಮಿಕ ಶಾಲೆಗಳು**

| ದಿನಗಳು | ಸಮಯ | ನಡೆಯುವ ತರಗತಿಗಳು |
|---|---|---|
| ಸೋಮವಾರ | 10.00 ರಿಂದ 4.30 | 8ನೇ ತರಗತಿ |
| | 10.00 ರಿಂದ 12.30 | 6ನೇ ತರಗತಿ ವಿದ್ಯಾಗಮ |
| ಮಂಗಳವಾರ | 10.00 ರಿಂದ 4.30 | 8ನೇ ತರಗತಿ |
| | 10.00 ರಿಂದ 12.30 | 7ನೇ ತರಗತಿ ವಿದ್ಯಾಗಮ |
| ಬುಧವಾರ | 10.00 ರಿಂದ 4.30 | 8ನೇ ತರಗತಿ |
| | 10.00 ರಿಂದ 12.30 | 6ನೇ ತರಗತಿ ವಿದ್ಯಾಗಮ |
| ಗುರುವಾರ | 10.00 ರಿಂದ 4.30 | 8ನೇ ತರಗತಿ |

| | | |
|---|---|---|
| | 10.00 ರಿಂದ 12.30 | 7ನೇ ತರಗತಿ ವಿದ್ಯಾಗಮ |
| ಶುಕ್ರವಾರ | 10.00 ರಿಂದ 4.30 | 8ನೇ ತರಗತಿ |
| | 10.00 ರಿಂದ 12.30 | 6ನೇ ತರಗತಿ ವಿದ್ಯಾಗಮ |
| ಶನಿವಾರ | 10.00 ರಿಂದ 12.30 | 8ನೇ ತರಗತಿ |
| | 10.00 ರಿಂದ 12.30 | 7ನೇ ತರಗತಿ ವಿದ್ಯಾಗಮ |

**ವಿಶೇಷ ಸೂಚನೆ:-**

ತರಗತಿಗಳನ್ನು ಪೂರ್ಣ ಪ್ರಮಾಣದಲ್ಲಿ ನಡೆಸಲು ಶಾಲಾ ಹಂತದಲ್ಲಿ ಕೊಠಡಿಗಳ ಲಭ್ಯತೆ, ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಶಿಕ್ಷಕರ ಸಂಖ್ಯೆಯನ್ನು ಆಧರಿಸಿಕೊಂಡು ಎಸ್.ಒ.ಪಿ ಪಾಲನೆಗೋಸ್ಕರ ವೇಳಾ ಪಟ್ಟಿಯನ್ನು ಪರಿಷ್ಕರಿಸಿ ತರಗತಿಗಳನ್ನು ನಡೆಸಬಹುದಾಗಿದೆ.

ಉಲ್ಲೇಖ(2)ರ ಸುತ್ತೋಲೆಯಲ್ಲಿರುವ ಎಲ್ಲ ಅಂಶಗಳನ್ನು ಗಮನದಲ್ಲಿರಿಸಿಕೊಂಡು ರಾಜ್ಯದಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಲ್ಲಿ ಅನುಷ್ಠಾನಗೊಳಿಸಲು ಉಪನಿರ್ದೇಶಕರು(ಆಡಳಿತ) ಇವರು ಅಗತ್ಯ ಕ್ರಮವಹಿಸಲು ಸೂಚಿಸಿದೆ.

ಕೋವಿಡ್ ಹಿನ್ನೆಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ, ಇಲಾಖೆ ಮತ್ತು ಜಿಲ್ಲಾಡಳಿತಗಳು ನೀಡುವ ಸೂಚನೆಗಳನ್ನು ಪಾಲಿಸಲು ತಿಳಿಸಿದೆ.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

ನಿರ್ದೇಶಕರು [ಪ್ರೌಢ ಶಿಕ್ಷಣ]
ಸಾರ್ವಜನಿಕ ಶಿಕ್ಷಣ ಇಲಾಖೆ,

ಇವರಿಗೆ:-

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ ಮತ್ತು ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಕಳುಹಿಸುತ್ತಾ ಸರ್ಕಾರದ ಹಾಗೂ ಆರೋಗ್ಯ ಇಲಾಖೆಯ ರಾಜ್ಯ ಕೋವಿಡ್ ತಾಂತ್ರಿಕ ಸಲಹಾ ಸಮಿತಿ ಸದಸ್ಯರ ನಡವಳಿಯಂತೆ ಕ್ರಮವಹಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ),ರವರ ಮೂಲಕ ಮುಂದಿನ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
4. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು ಎಸ್.ಎಸ್.ಎ/ಆರ್.ಎಂ.ಎಸ್.ಎ ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ರವರಿಗೆ ಮಾಹಿತಿಗಾಗಿ
7. ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
8. ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ರವರಿಗೆ ಮಾಹಿತಿಗಾಗಿ
9. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
10. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
11. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
12. ಆಯುಕ್ತರು, ಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
13. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ
14. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕಕರುಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
15. ಸಹ ನಿರ್ದೇಶಕರು ಮಧ್ಯಾಹ್ನ ಉಪಹಾರ ಯೋಜನೆ ಬೆಂಗಳೂರು ರವರಿಗೆ. ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
16. ಕಛೇರಿ ಪ್ರತಿ